ಬುಧವಾರದ ಉಷ್ಣಾಂಶ
31° ಗರಿಷ್ಠ 20° ಕನಿಷ್ಠ

ಹವಾಮಾನ ಮುನ್ಸೂಚನೆ
ನಗರದಲ್ಲಿ ಮೋಡ ಕವಿದ ವಾತಾವರಣ. ಸಂಜೆ ವೇಳೆಗೆ ಅಲ್ಲಲ್ಲಿ ಮಳೆ ಸಾಧ್ಯತೆ.

ಹವಾಮಾನ	ಗುರುವಾರ	ಶುಕ್ರವಾರ	ಶನಿವಾರ
	32° 22°	32° 22°	32° 22°

ಉತ್ತಮ ಮುಂಗಾರು ನಿರೀಕ್ಷೆ • 77 ಲಕ್ಷ ಹೆಕ್ಟೇರ್‌ನಲ್ಲಿ ಬಿತ್ತನೆಗೆ ಸಿದ್ಧತೆ • 103 ಲಕ್ಷ ಟನ್ ಉತ್ಪಾದನೆ ಗುರಿ

ಮುಂಗಾರು ಪೂರ್ವ ಮಳೆ: ಕೃಷಿಗೆ ಸಜ್ಜಾದ ಇಳೆ

• ಎಸ್. ರವಿಪ್ರಕಾಶ್

ಪ್ರಜಾವಾಣಿ ವಿಶೇಷ

ಬೆಂಗಳೂರು: ಈ ಬಾರಿ ಮುಂಗಾರು ಪೂರ್ವ ಮಳೆ ವಾಡಿಕೆಗಿಂತ ಅಧಿಕವಾಗಿದ್ದು, ಜೂನ್ ಮೊದಲ ವಾರವೇ ಕಾಲಿಡುವ ಮುಂಗಾರಿನಲ್ಲೂ ಉತ್ತಮ ಮಳೆ ಸುರಿಯಲಿ ಎಕ್ಕಸಕ್ಕಗೆವೆ. ಇದರಿಂದಾಗಿ ಕೋವಿಡ್ ಮಧ್ಯೆಯೂ ರಾಜ್ಯದಲ್ಲಿ ಕೃಷಿ ಚಟುವಟಿಕೆ ಗರಿಗೆದರಿದೆ.

ಈ ವರ್ಷ ಸುಮಾರು 103 ಲಕ್ಷ ಟನ್ ಆಹಾರ ಧಾನ್ಯಗಳ ಉತ್ಪಾದನೆಗೆ ಗುರಿ ಹಾಕಿಕೊಂಡಿದ್ದು, ಕೋವಿಡ್ ಮಾರ್ಗಸೂಚಿಗಳನ್ನು ಪಾಲಿಸಿ ರೈತರಿಗೆ ಉತ್ತೇಜನ ಕೃಷಿ ಇಲಾಖೆ ಸಿದ್ಧತೆ ನಡೆಸಿದೆ. 77 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಗೆ ಅನುಗುಣವಾಗಿ ಬಿತ್ತನೆ ಬೀಜವನ್ನು ದಾಸ್ತಾನು ಇಟ್ಟುಕೊಳ್ಳಲಾಗಿದೆ. ರಸಗೊಬ್ಬರವೂ ಅಗತ್ಯಕ್ಕೆ ತಕ್ಕಷ್ಟು ದಾಸ್ತಾನು ಇಟ್ಟುಕೊಳ್ಳಲಾಗಿದೆ.

ಹಿಂದಿನ ವರ್ಷದಂತೆ ಈ ವರ್ಷವೂ 'ಲಾ ನಿನಾ' ಹವಾಮಾನ ಪರಿಣಾಮ ಏಪ್ರಿಲ್ ಮತ್ತು ಮೇ ತಿಂಗಳೆನಲ್ಲಿ ವಾಡಿಕೆಗಿಂತ ಅಧಿಕ ಮಳೆಯಾಗಿದೆ. ಇದರ ಪರಿಣಾಮ ರಾಜ್ಯದ ದಕ್ಷಿಣ ಇಟ್ಟುಕೊಳ್ಳಲಾಗಿದೆ. ರಸಗೊಬ್ಬರವೂ ಅಗತ್ಯಕ್ಕೆ ತಕ್ಕಷ್ಟು ದಾಸ್ತಾನು ಇಟ್ಟುಕೊಳ್ಳಲಾಗಿದೆ.

ಭಾರತೀಯ ಹವಾಮಾನ ಇಲಾಖೆಯ ಮಾಹಿತಿಯ ಪ್ರಕಾರ, ಮುಂಗಾರು ಪೂರ್ವ ಅವಧಿಯಲ್ಲಿ 10 ಜಿಲ್ಲೆಗಳಲ್ಲಿ ಅತ್ಯಧಿಕ, 13 ಜಿಲ್ಲೆಗಳಲ್ಲಿ ಅಧಿಕ, 4 ಜಿಲ್ಲೆಗಳಲ್ಲಿ ಸಾಮಾನ್ಯ ಮತ್ತು 3 ಜಿಲ್ಲೆಗಳಲ್ಲಿ ಕೊರತೆ ಕಂಡು ಬಂದಿದೆ. ಕರ್ನಾಟಕ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿಯ ಪ್ರಕಾರ, ಮಾರ್ಚ್‌ನಲ್ಲಿ 4 ಮಿ.ಮೀ, ಏಪ್ರಿಲ್‌ನಲ್ಲಿ 49 ಮಿ.ಮೀ ಮತ್ತು ಮೇ ತಿಂಗಳೆನಲ್ಲಿ ಈವರೆಗೆ 82 ಮಿ.ಮೀ ಮಳೆಯಾಗಿದೆ. ಒಟ್ಟು 134 ಮಿ.ಮೀ ಮಳೆಯಾಗಿದ್ದು, ವಾಡಿಕೆಗಿಂತ ಶೇ 63 ರಷ್ಟು ಅಧಿಕ ಮಳೆಯಾಗಿದೆ.

77 ಲಕ್ಷ ಹೆಕ್ಟೇರ್‌ನಲ್ಲಿ ಬಿತ್ತನೆ ಗುರಿ: ರಾಜ್ಯದಲ್ಲಿ ಮುಂಗಾರು ಪೂರ್ವ ಉತ್ತಮ ಮಳೆಯಾಗಿರುವುದರಿಂದ 77 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡಲು ಗುರಿ ಹಾಕಿಕೊಳ್ಳಲಾಗಿದೆ. ಈಗಾಗಲೇ ಚಾಮರಾಜನಗರ, ಮೈಸೂರು, ಮಂಡ್ಯ, ದಾವಣಗೆರೆ, ತುಮಕೂರು, ಹಾಸನ, ಚಿಕ್ಕಮಗಳೂರು ಜಿಲ್ಲೆಗಳಲ್ಲಿ 1.44 ಲಕ್ಷ ಹೆಕ್ಟೇರ್‌ಗಳಲ್ಲಿ ಬಿತ್ತನೆ ಆಗಿದೆ ಎಂದು ಕೃಷಿ ಇಲಾಖೆ ನಿರ್ದೇಶಕ ಬಿ.ವೈ.ಶ್ರೀನಿವಾಸ್ 'ಪ್ರಜಾವಾಣಿ'ಗೆ ತಿಳಿಸಿದರು.

ಬಿತ್ತನೆ ಬೀಜ ಮತ್ತು ರಸಗೊಬ್ಬರಕ್ಕೆ ಕೊರತೆ ಇಲ್ಲ. ದಾಸ್ತಾನು ಇದೆ. ಬೆಳಿಗ್ಗೆ 8 ರಿಂದ ರಾತ್ರಿ 8ರವರೆಗೆ ಕಾರ್ಯನಿರ್ವಹಿಸುತ್ತದೆ. ಈ ಸಂದರ್ಭದಲ್ಲಿ ಅವರು ಅಗತ್ಯ ಮಾಹಿತಿಗಳನ್ನು ಪಡೆದುಕೊಳ್ಳಬಹುದು ಎಂದೂ ಶ್ರೀನಿವಾಸ್ ತಿಳಿಸಿದರು.



ಹುಬ್ಬಳ್ಳಿ ಹೊರವಲಯದ ಹೆಬ್ಬಳ್ಳಿ ರೆಸ್ಟ್ ಸಮೀಪದ ಹೊಲವೊಂದರಲ್ಲಿ ಮಂಗಳವಾರ ಉಳುಮೆಯಲ್ಲಿ ತೊಡಗಿದ್ದ ರೈತರು. ಪ್ರಜಾವಾಣಿ ಚಿತ್ರ

ಈ ವರ್ಷದ ಕೃಷಿ ನೋಟ

77 ಲಕ್ಷ ಹೆಕ್ಟೇರ್ ಬಿತ್ತನೆ ಪ್ರದೇಶದ ಗುರಿ

1.44 ಲಕ್ಷ ಹೆಕ್ಟೇರ್ ಈವರೆಗೆ ಬಿತ್ತನೆ ಆದ ವಿಸ್ತೀರ್ಣ

ಜೂನ್‌ನಲ್ಲಿ ಉತ್ತಮ ಮಳೆ

'ಈ ಮುಂಗಾರಿನಲ್ಲಿ ಜೂನ್ ತಿಂಗಳೆನಲ್ಲಿ ಉತ್ತಮ ಮಳೆಯಾಗಲಿದ್ದು, ಜುಲೈ ಮತ್ತು ಆಗಸ್ಟ್‌ನಲ್ಲಿ ಕಡಿಮೆ ಆಗಲಿದೆ. ಮತ್ತೆ ಸೆಪ್ಟಂಬರ್‌ನಲ್ಲಿ ಉತ್ತಮ ಮಳೆಯಾಗಲಿದೆ ಎಂದು ವರದಿಯೊಂದು ಹೇಳಿದೆ. ಈ ರೀತಿ ಆದರೆ ಕಷ್ಟ. ಈ ವಾರದ ಕೊನೆಯಲ್ಲಿ ಮತ್ತೊಂದು ವರದಿ ಬರಲಿದ್ದು, ಅದರಲ್ಲಿ ಮುಂಗಾರಿನ ಸ್ಪಷ್ಟ ಚಿತ್ರಣ ಸಿಗಲಿದೆ' ಎಂದು ಕರ್ನಾಟಕ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ನಿವೃತ್ತ ನಿರ್ದೇಶಕ ಡಾ.ತ್ರೀನಿವಾಸರೆಡ್ಡಿ ತಿಳಿಸಿದರು.

ಬೇದಿಕೆ–ಪೂರೈಕೆ

ಕೃಷಿ ಸಾಮಗ್ರಿ	ಬೇದಿಕೆ	ಪೂರೈಕೆ	ದಾಸ್ತಾನು
ಬಿತ್ತನೆ ಬೀಜ	6 ಲಕ್ಷ ಕ್ವಿಂಟಲ್‌ಗೆ	6,549 ಕ್ವಿಂಟಲ್‌ಗೆ	5.93 ಲಕ್ಷ ಕ್ವಿಂಟಲ್‌	
ರಸಗೊಬ್ಬರ	26.47 ಲಕ್ಷ ಟನ್	4.66 ಲಕ್ಷ ಟನ್	12.16 ಲಕ್ಷ ಟನ್

ಸುದ್ದಿ 2 ನಿಮಿಷ

'ಪಿಎಸ್‌ಐ ಅರ್ಜುನ್ ಅವರನ್ನು ಜೈಲಿಗೆ ಕಳುಹಿಸಿ'

ಬೆಂಗಳೂರು: 'ವಿಚಾರಣೆ ನೆಪದಲ್ಲಿ ದಲಿತ ಯುವಕನನ್ನು ಠಾಣೆಗೆ ಕರೆದೊಯ್ದು ಮೂತ್ರ ನೆಕ್ಕಿಸಿರುವ ಚಿಕ್ಕಮಗಳೂರು ಜಿಲ್ಲೆ ಗೋಣಿಬೀಡು ಠಾಣೆಯ ಸಬ್‌ಇನ್ಸ್‌ಪೆಕ್ಟರ್ ಅರ್ಜುನ್ ಅವರನ್ನು ಬಂಧಿಸಿ ಜೈಲಿಗೆ ಕಳುಹಿಸಬೇಕು. ಅವರನ್ನು ಸೇವೆಯಿಂದಲೇ ವಜಾಗೊಳಿಸಬೇಕು' ಎಂದು ರಾಜ್ಯಸಭಾ ಸದಸ್ಯ ಎಲ್. ಹನುಮಂತಯ್ಯ ಒತ್ತಾಯಿಸಿದ್ದಾರೆ.

ಈ ಸಂಬಂಧ ಹನುಮಂತಯ್ಯ, ರಾಜ್ಯಸಭಾ ಸದಸ್ಯ ಸಯ್ಯದ್ ನಾಸೀರ್ ಹುಸೇನ್, ಕೆಪಿಸಿಸಿ ಕಾರ್ಯಾಧ್ಯಕ್ಷ ಧ್ರುವನಾರಾಯಣ್ ಹಾಗೂ ವಿಧಾನಪರಿಷತ್ ಸದಸ್ಯ ಪ್ರಕಾಶ್ ರಾಥೋಡ್ ಅವರು ರಾಜ್ಯ ಪೊಲೀಸ್ ಮಹಾನಿರ್ದೇಶಕರು ಹಾಗೂ ಪೊಲೀಸ್ ಮಹಾನಿರೀಕ್ಷಕರಿಗೆ ಮಂಗಳವಾರ ಮನವಿ ನೀಡಿದ್ದಾರೆ.

'ಕಿಡಗುಂದ ಗ್ರಾಮದ ಕೆ.ಎಲ್. ಪುನೀತ್ ಜೊತೆ ಅರ್ಜುನ್ ಅಮಾನವೀಯವಾಗಿ ನಡೆದುಕೊಂಡಿದ್ದಾರೆ. ಘಟನೆಯ ಬಗ್ಗೆ ಮಾಹಿತಿ ಸಿಕ್ಕ ಮೇಲೂ ಮೌನವಹಿಸಿದ್ದ ಚಿಕ್ಕಮಗಳೂರು ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿ ಅಕ್ಷಯ್ ಎಂ.ಹಾಕೆ ಅವರನ್ನು ಹೊಣೆಗಾರರನ್ನಾಗಿಸಿ ಅವಮಾನಕರಗೊಳಿಸಬೇಕು. ಘಟನೆಯ ವೇಳೆ ಕರ್ತವ್ಯದಲ್ಲಿದ್ದ ಕಾನ್‌ಸ್ಟೆಬಲ್ ಮೇಲೂ ಎಫ್‌ಐಆರ್ ದಾಖಲಿಸಬೇಕು' ಎಂದು ಆಗ್ರಹಿಸಿದ್ದಾರೆ.

ಬೀದಿ ಬದಿ ವ್ಯಾಪಾರಿಗಳ ಪ್ರತಿಭಟನೆ

ಬೆಂಗಳೂರು: ಬೀದಿ ಬದಿ ವ್ಯಾಪಾರದ ಅವಧಿ ವಿಸ್ತರಣೆ, ಪರಿಹಾರ ಮೊತ್ತ ಹೆಚ್ಚಳ ಹಾಗೂ ಪೊಲೀಸ್ ದೌರ್ಜನ್ಯ ತಡೆಯಲು ಒತ್ತಾಯಿಸಿ ಬೀದಿ ಬದಿ ವ್ಯಾಪಾರಿಗಳು ಕೆಲಸದ ಸ್ಥಳದಲ್ಲೇ ಮಂಗಳವಾರ ಪ್ರತಿಭಟನೆ ನಡೆಸಿದರು.

'ಲಾಕ್‌ಡೌನ್ ಬಳಿಕ ಜೀವನ ನಿರ್ವಹಣೆ ಮಾಡುವುದು ಬೀದಿ ಬದಿ ವ್ಯಾಪಾರಿಗಳಿಗೆ ಕಷ್ಟವಾಗಿದೆ. ಕೋವಿಡ್ ನಿಯಂತ್ರಿಸುವಲ್ಲಿ ವಿಫಲವಾದ ಸರ್ಕಾರ, ಜನರ ಮೇಲೆ ಲಾಕ್‌ಡೌನ್ ಹೇರಿಕೆ ಮಾಡಿದೆ. ರಾಜಕಾರಣಿಗಳು, ಅಧಿಕಾರಿಗಳಿಗೆ ಯಾವುದೇ ತೊಂದರೆ ಇಲ್ಲ. ಅವರ ವೇತನಕ್ಕೆ ಕುತ್ತು ತಂದುಕೊಂಡಿಲ್ಲ. ಪ್ರವಿಗಳಿಗೆ ಶಿಕ್ಷೆ ನೀಡಲಾಗಿದೆ' ಎಂದು ವ್ಯಾಪಾರಿಗಳು ಆಕ್ರೋಶ ವ್ಯಕ್ತಪಡಿಸಿದರು.

'ಕಾರ್ಮಿಕ ಕಾಯ್ದೆ ಪ್ರಕಾರ ಕನಿಷ್ಠ ವೇತನ ತಿಂಗಳಿಗೆ ₹12,057 ಇದೆ. ಈ ಸಂದರ್ಭದಲ್ಲಿ ಎರಡು ತಿಂಗಳಿಗೆ ₹2 ಸಾವಿರ ಪರಿಹಾರ ಘೋಷಣೆ ಮಾಡಿರುವುದು ನ್ಯಾಯವೇ' ಎಂದು ಪ್ರಶ್ನಿಸಿದರು. ಕನಿಷ್ಠ ₹15 ಸಾವಿರ ಪರಿಹಾರ ಘೋಷಣೆ ಮಾಡಬೇಕು ಎಂದು ಆಗ್ರಹಿಸಿದರು.

'ಹಣ್ಣು ತರಕಾರಿ ವ್ಯಾಪಾರದ ಅವಧಿಯನ್ನು ಕನಿಷ್ಠ ಮಧ್ಯಾಹ್ನ 2 ಗಂಟೆ ತನಕ ವಿಸ್ತರಿಸಬೇಕು. ಪ್ರಧಾನ ಮಂತ್ರಿ ಸ್ವಾನಿಧಿ ಯೋಜನೆಯಡಿ ನೀಡಿರುವ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು. ಮನೆ ಮಾಲೀಕರು ತಿಂಗಳ ಬಾಡಿಗೆಗೆ ಒತ್ತಾಯಿ ಮಾಡದಂತೆ ಆದೇಶ ಹೊರಡಿಸಬೇಕು' ಎಂದು ಒತ್ತಾಯಿಸಿದರು.

ಸ್ವಾಭಿಮಾನಿ ಪುಸ್ತಕ ಬಹುಮಾನ ಪ್ರಕಟ

ಬೆಂಗಳೂರು: ಸ್ವಾಭಿಮಾನಿ ಕರ್ನಾಟಕ ವೇದಿಕೆ ನೀಡುವ 'ಸ್ವಾಭಿಮಾನಿ ಪುಸ್ತಕ ಬಹುಮಾನ' ಪ್ರಕಟವಾಗಿದ್ದು, ಡಾ. ಮಿರ್ಜಾ ಬಷೀರ್ ಅವರ 'ಹಾರುವ ಹಕ್ಕಿ ಮತ್ತು ಇರುವೆ' ಕಥಾ ಸಂಕಲನ ಸೇರಿದಂತೆ ಐದು ಕೃತಿಗಳು ಆಯ್ಕೆಯಾಗಿವೆ.

ಮಂಬಾಳ ಹಿರೇಮಠ ಅವರ 'ಗಾಯಗೊಂಡವರಿಗೆ' ಕವನ ಸಂಕಲನ, ಸ್ವಿತಾಅಮೃತರಾಜ್‌ ಅವರ 'ಒಂದು ವಿಳಾಸದ ಹಿಂದೆ' ಪ್ರಬಂಧ ಸಂಕಲನ, ಜಾಣಗೆರೆ ವೆಂಕಟರಾಮಯ್ಯ ಅವರ 'ಜಲಯುದ್ಧ' ಕಾದಂಬರಿ, ಕಾತ. ಚಿಕ್ಕಣ್ಣ ಅವರ 'ಕಣ್ಣಂಚಿನ ನೆರಳು' ಕೃತಿಯು ಬಹುಮಾನಕ್ಕೆ ಭಾಜನವಾಗಿದೆ.

ವೇದಿಕೆಯ 20ನೇ ವಾರ್ಷಿಕೋತ್ಸವ ಪ್ರಯುಕ್ತ ಏಪ್ರಿಲ್‌ನಲ್ಲಿ ಸ್ಪರ್ಧೆಗೆ 2020ರಲ್ಲಿ ಪ್ರಕಟವಾದ 150ಕ್ಕೂ ಅಧಿಕ ಕೃತಿಗಳು ಬಂದಿದ್ದವು. ಅದರಲ್ಲಿ ಐದು ಪುಸ್ತಕಗಳನ್ನು ಆಯ್ಕೆ ಮಾಡಲಾಗಿದೆ. ಪ್ರಶಸ್ತಿಯು ತಲಾ ₹ 5 ಸಾವಿರ ನಗದು ಬಹುಮಾನ ಒಳಗೊಂಡಿದೆ.

ವಿಮರ್ಶಕ ಎಸ್.ಆರ್. ವಿಜಯಶಂಕರ, ಲೇಖಕ ದ್ವಾರನಕುಂಟೆ ಪಾತಣ್ಣ ಹಾಗೂ ಪತ್ರಕರ್ತ ರಘುನಾಥ ಚ.ಹ. ತೀರ್ಪುಗಾರರಾಗಿದ್ದರು. ಕೋವಿಡ್ ನಿಯಂತ್ರಣಕ್ಕೆ ಬಂದ ಬಳಿಕ ಬೆಂಗಳೂರಿನಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಭಾವಪೂರ್ಣ ಪ್ರಣಾಂಜಲಿ

ಶ್ರೀಮತಿ ಲಕ್ಷ್ಮಮ್ಮ (93 ವರ್ಷ)
(ದಿವಂಗತ ಅಕ್ಕಯಣ್ಣಗೌರ ರಾಮಾಕ್ಷಿ, ಕೇತಮಾರನಹಳ್ಳಿ, ಬೆಂಗಳೂರು)
ಇವರು ದಿನಾಂಕ 25-5-2021, ಮಂಗಳವಾರ ಸಂಜೆ 6.45 ಘಂಟೆಗೆ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ.
ಇಂತಿ ಮುಖಮತ್ತು ಕುಟುಂಬಸ್ಥರು

ಮೆಟ್ರೊ 2ನೇ ಹಂತ: ವಿಸ್ತರಿತ ಮಾರ್ಗದ ವೀಕ್ಷಣೆ ನಡೆಸಿದ ಯಡಿಯೂರಪ್ಪ

ಕೆಂಗೇರಿ ಮಾರ್ಗ: ಜುಲೈನಲ್ಲಿ ಸಂಚಾರ ಆರಂಭ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ನಮ್ಮ ಮೆಟ್ರೊ' ಎರಡನೇ ಹಂತದ ಮೈಸೂರು ರಸ್ತೆ ವಿಸ್ತರಿತ ಮಾರ್ಗವು ಜುಲೈನಲ್ಲಿ ಪ್ರಯಾಣಿಕರ ಸಂಚಾರಕ್ಕೆ ಮುಕ್ತವಾಗಲಿದೆ. 7.53 ಕಿ.ಮೀ. ಉದ್ದದ ಈ ಮಾರ್ಗ ನಾಯಂಡಹಳ್ಳಿ ನಿಲ್ದಾಣದಿಂದ ಕೆಂಗೇರಿಗೆ ಸಂಪರ್ಕ ಕಲ್ಪಿಸಲಿದೆ. ಬೈಯಪ್ಪನಹಳ್ಳಿಯಿಂದ ಕೆಂಗೇರಿಗೆ ₹56 ಹಾಗೂ ಕೆಂಗೇರಿಯಿಂದ ರೇಷ್ಮೆ ಸಂಸ್ಥೆಗೆ ಪ್ರಯಾಣಿಸಲು ₹ 60 ದರ ನಿಗದಿ ಮಾಡಲಾಗಿದೆ' ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದರು.

ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಮಂಗಳವಾರ ನೂತನ ಸಂಚಾರ ಮಾರ್ಗದ ವೀಕ್ಷಣೆ ನಡೆಸಿದ ಬಳಿಕ ಮಾತನಾಡಿದರು.

'ಈ ಯೋಜನೆಗೆ ₹1,560 ಕೋಟಿ ವೆಚ್ಚ ಮಾಡಲಾಗಿದೆ. ಭೂಸ್ವಾಧೀನಕ್ಕೆ ₹360 ಕೋಟಿ ವ್ಯಯಿಸಲಾಗಿದೆ. ಈ ಮಾರ್ಗದಿಂದಾಗಿ ಪೂರ್ವ–ಪಶ್ಚಿಮ ಕಾರಿಡಾರ್ ಮಾರ್ಗದ ಉದ್ದವು 18.1 ಕಿ.ಮೀ.ಗೆ ಹೆಚ್ಚಿದೆ' ಎಂದರು.

'ಈ ಮಾರ್ಗದಲ್ಲಿ ರೈಲಿನ ಪರೀಕ್ಷಾರ್ಥ ಓಡಾಟ ಪೂರ್ಣಗೊಂಡಿದೆ. ನಾಯಂಡಹಳ್ಳಿ, ರಾಜರಾಜೇಶ್ವರಿನಗರ, ಜ್ಞಾನಭಾರತಿ ನಿಲ್ದಾಣಗಳಲ್ಲಿ ವಾಹನ ನಿಲುಗಡೆ ಸೌಲಭ್ಯ ಕಲ್ಪಿಸಲಾಗಿದೆ. ಕೆಂಗೇರಿ ಬಸ್ ನಿಲ್ದಾಣದಲ್ಲಿ ಎರಡು ಆಂತಸ್ತಿನ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಈ ನಿಲ್ದಾಣ ಬಿಟ್ಟು ಉಳಿದೆಡೆ ಪ್ರಯಾಣಿಕರು ರಸ್ತೆ ದಾಟಲು ಪಾದಚಾರಿ ಮಾರ್ಗ ಬಳಸಬಹುದು. ವಿಸ್ತರಿತ ಮಾರ್ಗದಿಂದಾಗಿ ಪ್ರತಿದಿನ ಸರಾಸರಿ 75 ಸಾವಿರ ಮಂದಿಗೆ ಅನುಕೂಲವಾಗಲಿದೆ' ಎಂದು ತಿಳಿಸಿದರು.

'ಕೆಂಗೇರಿಯಿಂದ ಚಲ್ಲಘಟ್ಟದವರೆಗಿನ ವಿಸ್ತರಿತ ಮಾರ್ಗದ ಕಾಮಗಾರಿ ಪ್ರಗತಿಯಲ್ಲಿದೆ. ಇದು 2022ರ ಮಾರ್ಚ್ ಅಂತ್ಯದ ವೇಳೆಗೆ ಪೂರ್ಣಗೊಳ್ಳುವ ನಿರೀಕ್ಷೆ ಇದೆ. ಈ ಯೋಜನೆಯನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಲು ನಮ್ಮ ಸರ್ಕಾರ ಎಲ್ಲಾ ಪ್ರಯತ್ನಗಳನ್ನೂ ಮಾಡುತ್ತಿದೆ' ಎಂದರು.

ಮುಖ್ಯಮಂತ್ರಿ ಬಿ.ಎಸ್‌ಯಡಿಯೂರಪ್ಪ ನೂತನ ಮಾರ್ಗದ ಪರಿವೀಕ್ಷಣೆ ನಡೆಸಿದರು —ಪ್ರಜಾವಾಣಿ ಚಿತ್ರ

TeamLease
Putting India to Work

ಟೀಂಲೀಸ್ ಸರ್ವೀಸಸ್ ಲಿಮಿಟೆಡ್
6ನೇ ಮಹಡಿ, ಪಿಎಂಟಿಸಿ ಬಾಡಿಲು ಸಂಕೀರ್ಣ, 80 ಅಡಿ ರಸ್ತೆ, ಕೋರಮಂಗಲ, ಬೆಂಗಳೂರು, ಕರ್ನಾಟಕ – 560095, ಭಾರತ
ದೂರವಾಣಿ: +91 80 68243000, ಫ್ಯಾಕ್ಸ್: +91 80 68243001
corporateaffairs@teamlease.com | www.teamleasegroup.com

ನಿರ್ದೇಶಕರುಗಳ ಸಭೆಯ ನೋಟೀಸು

ಈ ಮುಂಬಳ ಕೊಟೀಸನ್ನು ಏಪ್ರಿಲ್‌ನಾಲ್ಕಿನಂದು ನಡೆದಿರುವ ಸೆಕ್ಯುರಿಟೀಸ್ ಅಂಡ್ ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ) ಲಿಸ್ಟಿಂಗ್ ಆಬ್ಲಿಗೇಶನ್ಸ್ ಅಂಡ್ ಡಿಸ್‌ಕ್ಲೋಜರ್ ರೀಕ್ವೈರ್‌ಮೆಂಟ್ಸ್ (ಎಲ್‌ಓಡಿಆರ್) 2015, ನಿಬಂಧನೆಗಳ 47(1)(ಎ)ರ ನಿಬಂಧನೆಯ ಅನುಸಾರ, ಕಂಪನಿಯ ನಿರ್ದೇಶಕರುಗಳ ಸಭೆಯನ್ನು ಬುಧವಾರ, ಜೂನ್ 09, 2021 ರಂದು ಭಾರತೀಯ ಕಾಲಮಾನ ಬೆಳಗ್ಗೆ 9.30 ಗಂಟೆಗೆ 31, ಮಾರ್ಚ್ 2021 ರಂದು ತ್ರೈಮಾಸಿಕ ಮತ್ತು ವರ್ಷಾಂತ್ಯ ಹಣಕಾಸಿನ ಒಟ್ಟಗಡಿ ಮತ್ತು ಪ್ರತ್ಯೇಕ ಆರ್ಥಿಕ ಫಲಿತಾಂಶಗಳನ್ನು ಮತ್ತು ಇತರ ಅಂಶಗಳ ಚರ್ಚೆಯನ್ನು ನಡೆಸಲಾಗುವುದು.

ನಿರ್ದೇಶಕರುಗಳ ಸಭೆಯ ನೋಟೀಸನ್ನು ಪಾಮಿಟಿಯ ಕಂಪನಿಯ ವೆಬ್‌ಸೈಟ್ www.teamleasegroup.com ನಲ್ಲಿ ಹಾಗೂ ಬಿಎಸ್‌ಇ ಲಿಮಿಟೆಡ್ ವೆಬ್‌ಸೈಟ್ www.bseindia.com ಮತ್ತು ನ್ಯಾಶನಲ್ ಸ್ಟಾಕ್ ಎಕ್ಸ್‌ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ವೆಬ್‌ಸೈಟ್ www.nseindia.com ಇಲ್ಲಿ ಕೂಡ ಲಭ್ಯವಿದೆ.

ಟೀಂಲೀಸ್ ಸರ್ವೀಸಸ್ ಲಿಮಿಟೆಡ್ ಸರವಾಗಿ ಸಹಿ/-
ಸ್ಥಳ: ಬೆಂಗಳೂರು ಆಲಕ್ ಚಂದ
ದಿನಾಂಕ: ಮೇ 25, 2021 ಕಂಪನಿ ಸೆಕ್ರೆಟರಿ ಮತ್ತು ಕಂಪ್ಲೈಯನ್ಸ್ ಆಫೀಸರ್

ಶೀರೂರು ಮಠ: ಅರ್ಜಿ ಮಾರ್ಪಡಿಸಲು ಅವಕಾಶ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಉಡುಪಿಯ ಶೀರೂರು ಮಠದ ನೂತನ ಪೀಠಾಧಿಪತಿಯನ್ನಾಗಿ ಅಪ್ಪಾಪ್ರಭುಸ್ವಾಮಿ ನೇಮಕ ಮಾಡಿರುವುದನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿ ಮಾರ್ಪಡಿಸಿ ಸಲ್ಲಿಸಲು ಅರ್ಜಿದಾರರಿಗೆ ಹೈಕೋರ್ಟ್ ಅನುಮತಿ ನೀಡಿದೆ.

ಮಠದ ಭಕ್ತರಾಗಿರುವ ಸಮಿತಿ ಕಾರ್ಯದರ್ಶಿ ಪಿ. ಲಾತವ್ಯ ಆಚಾರ್ಯ ಸೇರಿ ನಾಲ್ವರು ಸಲ್ಲಿಸಿರುವ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕಾ ನೇತೃತ್ವದ ವಿಭಾಗೀಯ ಪೀಠ, 'ಇದು ಸಂಪೂರ್ಣ ಖಾಸಗಿ ವ್ಯಾಜ್ಯ ಆಗಿರುವ ಕಾರಣ ಸಾರ್ವಜನಿಕ ಹಿತಾಸಕ್ತಿ ವ್ಯಾಜ್ಯಗಳಿಗೆ ಪರಿಗಣಿಸಲು ಆಗುವುದಿಲ್ಲ' ಎಂದು ಹೇಳಿತು.

'16 ವರ್ಷದ ಬಾಲಕನನ್ನು ಪೀಠಾಧಿಪತಿಯಾಗಿ ನೇಮಕ ಮಾಡಲಾಗಿದೆ. ಬಾಲಕನನ್ನು ಬಲವಂತವಾಗಿ ಸನ್ಯಾಸಿ ಮಾಡಲಾಗಿದೆ. 18 ವರ್ಷ ತುಂಬದೇ ಇರುವವರು ನೀಡುವ ಸಮ್ಮತಿಗೂ ಮಾನ್ಯತೆ ಇಲ್ಲ. ಪ್ರಕರಣದಲ್ಲಿ ಅಪ್ಪಾಪ್ರಭುರ ಹಕ್ಕುಗಳ ಉಲ್ಲಂಘನೆಯಾಗಿದೆ' ಎಂದು ವಿವರಿಸಿದರು. 'ಅರ್ಜಿಯಲ್ಲಿರುವ ಮನವಿಗಳನ್ನು ತಿದ್ದುಪಡಿ ಮಾಡಲಾಗುವುದು. ಅದಕ್ಕೆ ಅವಕಾಶ ನೀಡಬೇಕು' ಎಂದು ಅರ್ಜಿದಾರರ ಪರ ವಕೀಲ ಡಿ.ಆರ್. ರವಿಶಂಕರ್ ಕೋರಿದರು.

'ಅರ್ಜಿಯಲ್ಲಿ ಅಪ್ಪಾಪ್ರಭುರ ಹಕ್ಕುಗಳ ಬಗ್ಗೆ ಪ್ರಸ್ತಾಪಿಸಲ